# ‘ಪದವೀಧರರಿಗೆ ನಾಗರಿಕ ಜವಾಬ್ದಾರಿ ಮುಖ್ಯ’

## ಸೇಂಟ್ ಜೋಸೆಫ್ ವಿ.ವಿ ಘಟಿಕೋತ್ಸವದಲ್ಲಿ ರಾಜ್ಯಪಾಲ ಗೆಹಲೋತ್ ಅಭಿಪ್ರಾಯ

ಪ್ರಜಾವಾಣಿ ವಾರ್ತೆ

ಬೆಂಗಳೂರು: ‘ಪದವೀಧರರು ನಾಗರಿಕ ಜವಾಬ್ದಾರಿ ನಿಭಾಯಿಸಿದಾಗ ಅವರು ಪಡೆದ ಶಿಕ್ಷಣ ಸಮಾಜಮುಖಿಯಾಗುತ್ತದೆ’ ಎಂದು ರಾಜ್ಯಪಾಲ ಥಾವರಚಂದ್ ಗೆಹಲೋತ್ ಹೇಳಿದರು.

ಸೇಂಟ್ ಜೋಸೆಫ್ ವಿಶ್ವವಿದ್ಯಾಲಯದಲ್ಲಿ ಶನಿವಾರ ನಡೆದ ಎರಡನೇ ಘಟಿಕೋತ್ಸವ ಉದ್ಘಾಟಿಸಿ ಮಾತನಾಡಿದ ಅವರು, ‘ವೃತ್ತಿಪರ ಶಿಕ್ಷಣಕ್ಕೆ ವಿಶ್ವವಿದ್ಯಾಲಯಗಳು ಒತ್ತು ನೀಡಬೇಕು. ಅಭಿವೃದ್ಧಿ ಹೊಂದಿದ ರಾಷ್ಟ್ರ ನಿರ್ಮಾಣಕ್ಕೆ ಕಲಿತ ವಿದ್ಯೆ ವಿನಿಯೋಗಿಸಬೇಕು. ಸೇವಾ ಮನೋಭಾವ ಬೆಳೆಸಿಕೊಳ್ಳಬೇಕು’ ಎಂದು ಸಲಹೆ ನೀಡಿದರು.

ತಿರುವನಂತಪುರದ ಭಾರತೀಯ ವಿಜ್ಞಾನ ಶಿಕ್ಷಣ ಮತ್ತು ಸಂಶೋಧನಾ ಸಂಸ್ಥೆ ನಿರ್ದೇಶಕ ಜರುಗು ನರಸಿಂಹಮೂರ್ತಿ ಮಾತನಾಡಿ, ‘ಉದಯೋನ್ಮುಖ ತಂತ್ರಜ್ಞಾನ ಬಳಕೆಗೆ ವಿದ್ಯಾರ್ಥಿಗಳು ಚಿತ್ತ ಹರಿಸಬೇಕು. ತ್ಯಾಜ್ಯ ನಿರ್ವಹಣೆ, ಸೈಬರ್ ಭದ್ರತೆ, ಕೃತಕ ಬುದ್ಧಿಮತ್ತೆಯ ಸವಾಲು ಎದುರಿಸಬೇಕು’ ಎಂದರು.

ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ. ಸುಧಾಕರ್ ಅವರು ಮೊದಲ ರ್‍ಯಾಂಕ್ ಪಡೆದ ವಿದ್ಯಾರ್ಥಿಗಳಿಗೆ ಚಿನ್ನದ ಪದಕ, 2,747 ವಿದ್ಯಾರ್ಥಿಗಳಿಗೆ ಪದವಿ ಪ್ರದಾನ ಮಾಡಿದರು. ಶೈಕ್ಷಣಿಕ, ಎನ್‌ಸಿಸಿ, ಕ್ರೀಡೆ, ಮತ್ತು ಸಹಪಠ್ಯ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ 40 ವಿದ್ಯಾರ್ಥಿಗಳಿಗೆ ವಿಶೇಷ ಬಹುಮಾನ ವಿತರಿಸಿದರು.

ಕುಲಾಧಿಪತಿ ರೆವರೆಂಡ್ ಫಾದರ್ ಡಿಯೋನಿಸಿಯಸ್ ವಾಜ್, ಕಲಪತಿ ರೆವರೆಂಡ್ ವಿಕ್ಟರ್ ಲೋಬೊ, ಸಹ ಕುಲಪತಿಗಳಾದ ರೊನಾಲ್ಡ್ ಜೆ.ಮಸ್ಕರೇನ್ಹಸ್, ರೆವರೆಂಡ್ ಸ್ವೀಬರ್ಟ್ ಡಿಸಿಲ್ವಾ, ರೆಜಿನಾ ಮಥಿಯಾಸ್, ಪರೀಕ್ಷಾ ನಿಯಂತ್ರಕ ಗಾಡ್ವಿನ್ ಡಿಸೋಜಾ, ಕುಲಸಚಿವ ಸೈಯದ್ ವಜೀದ್, ಹಣಕಾಸು ಅಧಿಕಾರಿ ರೆವರೆಂಡ್ ಫಾದರ್ ಅರುಣ್ ಪಿ. ಡಿಸೋಜಾ ಉಪಸ್ಥಿತರಿದ್ದರು.



ಬೆಂಗಳೂರಿನ ಸೇಂಟ್ ಜೋಸೆಫ್ ವಿಶ್ವವಿದ್ಯಾಲಯದಲ್ಲಿ ಶನಿವಾರ ನಡೆದ ಎರಡನೇ ಘಟಿಕೋತ್ಸವದಲ್ಲಿ ವಿದ್ಯಾರ್ಥಿಗಳು ಚಿನ್ನದ ಪದಕಗಳೊಂದಿಗೆ ಸಂಭ್ರಮಿಸಿದರು. ಪ್ರಜಾವಾಣಿ ಚಿತ್ರ: ಪ್ರಶಾಂತ್ ಎಚ್.ಜಿ.